ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಖೆ / ವಿಷಯ: DEPARTMENT / SUBJECT: ರಾಜಕೀಯ

ಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ ದಿನಾಂಕ : DATE : 1/11/19

# ಅನರ್ಹರ ಕ್ಷೇತ್ರಗಳಿಗೆ ಬಂಪರ್ ಕೊಡುಗೆ

-1-11-19

ಸಂ.ಕ ಸಮಾಚಾರ ಬೆಂಗಳೂರು

ಡಿಸೆಂಬರ್ 5ರಂದು ರಾಜ್ಯದ ಹದಿನೈದು ವಿಧಾನಸಭೆ ಕ್ಷೇತ್ರಗಳಿಗೆ ಉಪ ಚುನಾವಣೆ ಘೋಷಣೆ ಆಗಿರುವ ಹಿನ್ನೆಲೆಯಲ್ಲಿ ಅನರ್ಹ ಶಾಸಕರ ಕ್ಷೇತ್ರಗಳಿಗೆ ಅನುದಾನ ಹಂಚಿಕೆ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲು ಮುಖ್ಯಮಂತ್ರಿ ಯಡಿಯೂರಪ್ಪ ನಿರ್ಧರಿಸಿದ್ದಾರೆ.



ಅನರ್ಹ ಶಾಸಕರು ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಚರ್ಚಿಸಿರುವ ಬೆನ್ನಲ್ಲೇ ಈ ನಿರ್ಧಾರಕ್ಕೆ ಬರಲಾಗಿದೆ. ಚುನಾವಣಾ ನೀತಿ ಸಂಹಿತೆ ಅನ್ವಯ ಆಗುವ ಪೂರ್ವದಲ್ಲೇ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡುವ ಮೂಲಕ ಅಭ್ಯರ್ಥಿಗಳ ಪರ ಪ್ರಚಾರ ಕಾರ್ಯದಲ್ಲಿ ತೊಡಗಿಸಿಕೊಳ್ಳುವ ನಿರ್ಧಾರಕ್ಕೆ ಬರಲಾಗಿದೆ. ಈ ದಿಸೆಯಲ್ಲಿ ಯಡಿಯೂರಪ್ಪ ಅವರ ಪ್ರವಾಸ ಕಾರ್ಯಕ್ರಮ ಈಗಾಗಲೇ ನಿಗದಿಯೂ ಆಗಿದೆ. ಚಿಕ್ಕಬಳ್ಳಾಪುರ, ಹಿರೇಕೆರೂರು, ಹೊಸಪೇಟೆ ಮತ್ತಿತರ ಕ್ಷೇತ್ರಗಳಲ್ಲಿ ಆರಂಭಿಕ ಹಂತವಾಗಿ ಪ್ರವಾಸ ಕಾರ್ಯ ಕೈಗೊಳ್ಳಲಿದ್ದು ಜೊತೆಗೆ ವಿವಿಧ ಕಾಮಗಾರಿಗಳಿಗೆ ಚಾಲನೆಯನ್ನೂ ನೀಡಲಿದ್ದಾರೆ.

ಉಪಚುನಾವಣೆಯಲ್ಲಿ ಕನಿಷ್ಠ ಹದಿಮೂರು ಸ್ಥಾನಗಳನ್ನಾದರೂ ಗೆಲ್ಲಲೇಬೇಕೆಂಬ ಅನಿವಾರ್ಯತೆ ಬಿಜೆಪಿಯದ್ದಾಗಿದೆ. ಹೀಗಾಗಿ ಸರ್ಕಾರದ ಅಳಿವು-ಉಳಿವು ಕೂಡ ಅನರ್ಹ ಶಾಸಕರ ಗೆಲುವಿನಲ್ಲೇ ಅಡಗಿದೆ. ಇದರಿಂದ ಉಪಸಮರ ಜೋರಾಗಿಯೇ ನಡೆಯಲಿದೆ. ಮುಖ್ಯಮಂತ್ರಿಗಳ ಜೊತೆಗೆ ಇನ್ನಿತರ ಸಚಿವರು ಮತ್ತು ಪಕ್ಷದ ಮುಖಂಡರು ಚುನಾವಣಾ ಪ್ರಚಾರಕ್ಕಿಳಿಯಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಅನರ್ಹ ಶಾಸಕರನ್ನು ಗೆಲ್ಲಿಸಿಕೊಂಡು ಬರುವ ದಿಸೆಯಲ್ಲಿ ಹದಿನೈದು ಕ್ಷೇತ್ರಗಳಿಗೂ ಒಬ್ಬೊಬ್ಬ ಸಚಿವರನ್ನು ಉಸ್ತುವಾರಿಯನ್ನಾಗಿ ನೇಮಕ ಮಾಡಲು ನಿರ್ಧರಿಸಲಾಗಿದೆ. ಪಕ್ಷದ ವತಿಯಿಂದಲೂ ಸಮಿತಿ ರಚಿಸಲು ನಿರ್ಧರಿಸಲಾಗಿದ್ದು ಸಮಿತಿ ಸದಸ್ಯರು ಅಭ್ಯರ್ಥಿ ಗೆಲುವಿಗಾಗಿ ಕಾರ್ಯ ನಿರ್ವಹಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

6